Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

12.05.2026 14.30 hrs

<><*<><>*><>

ಮುಖ್ಯಾಂಶಗಳು

- ಪ್ರಧಾನಿ ಬೆಂಗಳೂರು ಪ್ರವಾಸದ ವೇಳೆ ಭದ್ರತಾ ಲೋಪ; ಎನ್‌ಐಎಗೆ ಪ್ರಕರಣ ಹಸ್ತಾಂತರ- ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ
- ಬೆಂಗಳೂರಿನಲ್ಲಿ ಪಿಎಂ ಇ-ಡ್ರೈವ್ ಇವಿ ಚಾರ್ಜಿಂಗ್ ಮೂಲ ಸೌಕರ್ಯ ಸಬಲೀಕರಣ ಕುರಿತ ಸಮ್ಮೇಳನ ಉದ್ಘಾಟಿಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ
- ಜಾಗತಿಕವಾಗಿ ಸ್ಪರ್ಧಾತ್ಮಕ ಎಮ್‌ಎಸ್‌ಎಮ್‌ಇಗಳನ್ನು ರಚಿಸಲು ಕೇಂದ್ರ ಸರ್ಕಾರ ಬದ್ಧ- ಸಚಿವ ಜಿತನ್ ರಾಮ್ ಮಾಂಜಿ ಸ್ಪಷ್ಟನೆ
- ಪ್ರಧಾನಿಗೆ ಭದ್ರತೆ ನೀಡಲು ರಾಜ್ಯ ಸರ್ಕಾರ ಸಂಪೂರ್ಣ ವಿಫಲ- ಬಿಜೆಪಿ ಅಸಮಾಧಾನ
- ಮೇ ೩ ರಂದು ನಡೆದ ನೀಟ್ ಪರೀಕ್ಷೆ ರದ್ದುಗೊಳಿಸಿದ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ

<><*<><>*><>

ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತ ತಿರುಚುವಿಕೆ ಆರೋಪ ಕುರಿತಂತೆ ತನಿಖೆ ನಡೆಯುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಈ ಪ್ರಕರಣವನ್ನು ಗಂಭಿರವಾಗಿ ಪರಿಗಣಿಸಿದ್ದು, ಕಾನೂನು ಪ್ರಕಾರ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ದೂರಿನ ಸತ್ಯಾಸತ್ಯತೆ ಪರಿಶೀಲಿಸಲು ಎಫ್‌ಎಸ್‌ಎಲ್ ಸಹಾಯ ಪಡೆಯಲಾಗುತ್ತಿದ್ದು, ಇದು ಮತ ಎಣಿಕೆ ಪ್ರಕ್ರಿಯೆಯ ಒಂದು ಭಾಗವಾಗಿಯೂ ಪರಿಶೀಲನೆಗೆ ಒಳಪಡಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಪ್ರಧಾನಿ ನರೇಂದ್ರ ಮೋದಿ ಅವರು ಬೆಂಗಳೂರಿಗೆ ಆಗಮಿಸಿದ್ದಾಗ ಉಂಟಾದ ಭದ್ರತಾ ಲೋಪ ಕುರಿತಂತೆ ಪ್ರತಿಕ್ರಿಯಿಸಿ, ಪ್ರಕರಣವನ್ನು ಎನ್‌ಐಎಗೆ ಹಸ್ತಾಂತರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಜಿಲೆಟಿನ್ ಕಡ್ಡಿ ಪತ್ತೆ ಪ್ರಕರಣದ ತನಿಖೆ ನಡೆಸಲು ಎನ್‌ಐಎ ರಾಜ್ಯ ಪೊಲೀಸರನ್ನು ಕೋರಿರುವುದಾಗಿ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

<><*<><>*><>

ಸುಸ್ಥಿರ ಸಾರಿಗೆಯ ಭವಿಷ್ಯವು ವಿದ್ಯುತ್ ವಾಹನಗಳ ಮೇಲೆ ಮಾತ್ರವಲ್ಲ ರಾಷ್ಟ್ರದಾದ್ಯಂತ ದೃಢವಾದ ಮತ್ತು ಭವಿಷ್ಯಕ್ಕೆ ಸಿದ್ದವಾದ ಚಾರ್ಜಿಂಗ್ ಜಾಲವನ್ನು ನಿರ್ಮಿಸುವುದರ ಮೇಲೆ ಅವಲಂಬಿತವಾಗಿದೆ

ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಪಿಎಂ ಇ-ಡ್ರೈವ್ ಯೋಜನೆಯಡಿ ದೇಶಾದ್ಯಂತ ಇವಿ ಚಾರ್ಜಿಂಗ್ ಮೂಲಸೌಕರ್ಯ ಸಬಲೀಕರಣ ಕುರಿತ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ತಂತ್ರಜ್ಞಾನದಲ್ಲಿ ಮುಂಚೂಣಿಯಲ್ಲಿರುವ ಬೆಂಗಳೂರಿನಲ್ಲಿ ಈ ಸಮ್ಮೇಳನ ಆಯೋಜಿಸುತ್ತಿರುವುದು ಸಂತಸದ ವಿಚಾರ ಎಂದು ಹೇಳಿದ್ದಾರೆ. ಕೇಂದ್ರ ಕೈಗಾರಿಕಾ ಸಚಿವಾಲಯ, ಪಿಎಂ ಇ-ಡ್ರೈವ್ ಯೋಜನೆಯಡಿಯಲ್ಲಿ ರಾಷ್ಟ್ರವ್ಯಾಪಿ ಬ್ಯಾಟರಿಗಳ ಉತ್ಪಾದನೆಗೆ ಉತ್ತೇಜನ ನೀಡುತ್ತಿದೆ. ಇದು ದೇಶದ ಜಿಡಿಪಿ ಬೆಳವಣಿಗೆಗೂ ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ಎಚ್.ಡಿ.ಕುಮಾರಸ್ವಾಮಿ ( ಸೆಕೆಂಡ್ಸ್)

ದೇಶಾದ್ಯಂತ ಇವಿ ಚಾರ್ಜಿಂಗ್ ಮೂಲಸೌಕರ್ಯವನ್ನು ವಿಸ್ತರಿಸುವತ್ತ ಗಮನ ಹರಿಸಿದ ಈ ಸಮ್ಮೇಳನದಲ್ಲಿ ಬೃಹತ್ ಕೈಗಾರಿಕೆಗಳ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಡಾ. ಹನೀಫ್ ಖುರೇಷಿ, ಬಿಹೆಚ್ಇಎಲ್, ಐಸಿಎಟಿ, ತೈಲ ಮಾರಾಟ ಕಂಪನಿಗಳು, ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು ಮತ್ತು ಉದ್ಯಮದ ಪಾಲುದಾರರು ಉಪಸ್ಥಿತರಿದ್ದರು.

<><*<><>*><>

ರಾಜ್ಯದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪರಿಸರ ವ್ಯವಸ್ಥೆ ಮತ್ತು ಉತ್ಪಾದನಾ ವಲಯಕ್ಕೆ ಗಮನಾರ್ಹ ಉತ್ತೇಜನ ನೀಡುವ ಎನ್ಐಸಿ ತಂತ್ರಜ್ಞಾನ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಬೆಂಗಳೂರಿನಲ್ಲಿಂದು ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಿತನ್ ರಾಮ್ ಮಾಂಜಿ ಹಾಗೂ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಕೇಂದ್ರ ಸಚಿವ ಜಿತನ್ ರಾಮ್ ಮಾಂಜಿ, ಜಾಗತಿಕವಾಗಿ ಸ್ಪರ್ಧಾತ್ಮಕ ಎಮ್ಎಸ್ಎಮ್ಇಗಳನ್ನು ರಚಿಸಲು ಮತ್ತು ಭಾರತದ ಉತ್ಪಾದನಾ ಪರಿಸರ ವ್ಯವಸ್ಥೆ ಬಲಪಡಿಸಲು ದೇಶದಾದ್ಯಂತ ಆಧುನಿಕ ತಂತ್ರಜ್ಞಾನ ಕೇಂದ್ರಗಳು ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಸುವತ್ತ ಕೇಂದ್ರ ಸರ್ಕಾರ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ತಿಳಿಸಿದ್ದಾರೆ. ಎಮ್ಎಸ್ಎಮ್ಇಗಳು ಯುವಕರಿಗೆ ಉದ್ಯೋಗವಕಾಶಗಳನ್ನು ಸೃಷ್ಟಿಸಲು ಸಹಾಯಕವಾಗಲಿವೆ ಎಂದು ಅವರು ಹೇಳಿದ್ದಾರೆ. ಇದೇ ವೇಳೆ ಮಾತನಾಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ದೇಶದ ಅತಿ ದೊಡ್ಡ ಕೈಗಾರಿಕಾ ಸಮೂಹಗಳಲ್ಲಿ ಒಂದಾಗಿರುವ ಪೀಣ್ಯಕ್ಕೆ ಎಮ್ಎಸ್ಎಮ್ಇಗಳ ವಿಕಸನಗೊಳ್ಳುತ್ತಿರುವ ತಾಂತ್ರಿಕ ಅಗತ್ಯತೆಗಳನ್ನು ಪೂರೈಸಲು ಸುಧಾರಿತ ಸಾಂಸ್ಥಿಕ ಬೆಂಬಲ ಹಾಗೂ ಸೌಕರ್ಯದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸಣ್ಣ ಕೈಗಾರಿಕೆಗಳ ನಿಗಮ ಲಿಮಿಟೆಡ್‌ನ ಪರಿಶಿಷ್ಟ ಜಾತಿ- ಪರಿಶಿಷ್ಟ ಪಂಗಡ ಹಬ್ ಸ್ಕೀಮ್ ಅಡಿಯಲ್ಲಿ ನೀಡಲಾಗುವ ವಿವಿಧ ತರಬೇತಿಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಕೇಂದ್ರ ಸಚಿವರಾದ ಜಿತನ್ ರಾಮ್ ಮಾಂಝಿ

ಹಾಗೂ ಶೋಭಾ ಕರಂದ್ಲಾಜೆ ಪ್ರಮಾಣಪತ್ರ ವಿತರಿಸಿದರು. ಪೀಣ್ಯದಲ್ಲಿ ಎಮ್‌ಎಸ್‌ಎಮ್‌ಇಗಳಿಗೆ ತಂತ್ರಜ್ಞಾನ ಪ್ರವೇಶ, ಪರೀಕ್ಷಾ ಸೌಲ್ಯಭ್ಯಗಳು, ಕೌಶಲ್ಯ, ನಾವೀನ್ಯತೆ ಮತ್ತು ಉದ್ಯಮ ಸ್ಪರ್ಧಾತ್ಮಕತೆಯನ್ನು ಬಲಪಡಿಸಲು ಕೇಂದ್ರದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವಾಲಯದ ಬೆಂಬಲದೊಂದಿಗೆ ರಾಷ್ಟ್ರೀಯ ಸಣ್ಣ ಕೈಗಾರಿಕಾ ನಿಗಮ ಪ್ರಸ್ತಾವಿತ ಅತ್ಯಾಧುನಿಕ ಕೇಂದ್ರ ಸ್ಥಾಪಿಸಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಬೆಂಗಳೂರಿಗೆ ಆಗಮಿಸಿದ್ದಾಗ ನಡೆದಿರುವ ಭದ್ರತಾ ಲೋಪದ ಬಗ್ಗೆ ಎನ್‌ಐಎ ತನಿಖೆ ನಡೆಸಬೇಕು ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ಆಗಮಿಸಿದಾಗ ಕಾಂಗ್ರೆಸ್ ಸರ್ಕಾರ ಸರಿಯಾದ ಭದ್ರತೆ ನೀಡದೆ ಲೋಪವೆಸಗಿದೆ. ಇದೇ ಸಂದರ್ಭದಲ್ಲಿ ನೂರಾರು ಮಂದಿ ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡಿರುವ ಅಗತ್ಯವೇನಿತ್ತು ಎಂದು ಪ್ರಶ್ನಿಸಿದ್ದಾರೆ. ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಪ್ರಧಾನಿ ಮೇಲೆ ಕಾಳಜಿ ಹಾಗೂ ಗೌರವ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ಈ ತಿಂಗಳ ೩ ರಂದು ನಡೆದ ನೀಟ್ ಯುಜಿ ೨೦೨೬-ಪರೀಕ್ಷೆಯನ್ನು ರದ್ದುಗೊಳಿಸಲು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನಿರ್ಧರಿಸಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಎನ್‌ಟಿಎ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದೆ. ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪದ ಸಮಗ್ರ ತನಿಖೆಗಾಗಿ ಪ್ರಕರಣವನ್ನು ಕೇಂದ್ರೀಯ ತನಿಖಾ ದಳಕ್ಕೆ ವಹಿಸಲು ತೀರ್ಮಾನಿಸಲಾಗಿದೆ. ವಿವಿಧ ತನಿಖಾ ಸಂಸ್ಥೆಗಳು ನೀಡಿದ ವರದಿಗಳನ್ನು ಎನ್‌ಟಿಎ, ಸಮನ್ವಯದೊಂದಿಗೆ ಪರಿಶೀಲಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದ್ದು, ಅಗತ್ಯವಿರುವ ಎಲ್ಲಾ ದಾಖಲೆ ಮತ್ತು ಸಹಕಾರವನ್ನು ನೀಡುವುದಾಗಿ ಸಂಸ್ಥೆ ತಿಳಿಸಿದೆ. ರದ್ದುಗೊಂಡಿರುವ ಪರೀಕ್ಷೆಯನ್ನು ಶೀಘ್ರದಲ್ಲೇ ಮರು ನಡೆಸಲಾಗುವುದು ಮತ್ತು ಅದರ ದಿನಾಂಕಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗುವುದು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಸ್ಪಷ್ಟಪಡಿಸಿದೆ.

<><*<><>*><>

ಮಲೆ ಮಹದೇಶ್ವರ ವನ್ಯಜೀವಿಧಾಮ ವ್ಯಾಪ್ತಿಯ ಹನೂರು ತಾಲೂಕಿನ ಇಂಡಿಗನತ್ತ ಬಳಿ ಬಾಲಕನನ್ನು ಕೊಂದ ಚಿರತೆ ಸೆರೆಗೆ ಅರಣ್ಯ ಇಲಾಖೆ ಕಾರ್ಯಾಚರಣೆ ಆರಂಭಿಸಿದೆ. ೩೦ಕ್ಕೂ ಅಧಿಕ ಮಂದಿ ಈ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ. ನಾಗಮಲೆ ಮತ್ತು ಇಂಡಿಗನತ್ತದ ದಟ್ಟಾರಣ್ಯದಲ್ಲಿ ಚಿರತೆ ಬೀಡು ಬಿಟ್ಟಿರುವ ಶಂಕೆ ಇದ್ದು ಥರ್ಮಲ್ ಡ್ರೋಣ್ ಕ್ಯಾಮರಾದಲ್ಲಿ ಚಿರತೆಯ ದೃಶ್ಯ ಒಂದು ಬಾರಿ

ಸೆರೆಯಾಗಿದೆ. ಡ್ರೋಣ್ ಕ್ಯಾಮರಾ ಸದ್ದು ಕೇಳುತ್ತಿದ್ದಂತೆ ಚಿರತೆ ಅವಿತುಕೊಳ್ಳುತ್ತಿದೆ ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ. ಪಶು ವೈದ್ಯರು ಮತ್ತು ತಜ್ಞರು ಕಾರ್ಯಾಚರಣೆಯಲ್ಲಿ ತೊಡಗಿದ್ದು, ಆಯಕಟ್ಟಿನ ಸ್ಥಳಗಳಲ್ಲಿ ಅರಣ್ಯ ಇಲಾಖೆ ಬೋನ್ ಗಳನ್ನು ಇರಿಸಿದೆ. ಈ ನಡುವೆ ಕಳೆದ ರಾತ್ರಿ ಚಿರತೆಯೊಂದು ಎರಡು ಮೇಕೆಗಳನ್ನು ಹೊತ್ತೊಯ್ದಿದ್ದು ಅರಣ್ಯ ಇಲಾಖೆ ಸಿಬ್ಬಂದಿ ಪರಿಶೀಲನೆ ನಡೆಸಿದ್ದಾರೆ.

<><*<><>*><>

ಮಾಜಿ ಕ್ರಿಕೆಟಿಗ ವಿನಯ್ ಎಸ್.ಬಾದಾಮಿ ಹೃದಾಯಘಾತದಿಂದ ನಿನ್ನೆ ನಿಧನರಾಗಿದ್ದಾರೆ. ವಿನಯ್ ಬಾದಾಮಿ, ಅಂತಾರಾಷ್ಟ್ರೀಯ ಕ್ರಿಕೆಟ್ ಅಂಪೈರ್ ಸತ್ಯಜಿತ್ ರಾವ್ ಮತ್ತು ಹಿರಿಯ ಪತ್ರಕರ್ತೆ ಹಾಗೂ ಆಕಾಶವಾಣಿ ಸುದ್ದಿ ವಿಭಾಗದ ವಾರ್ತಾವಾಚಕಿಯಾಗಿದ್ದ ನಾಗಮಣಿ ಎಸ್.ರಾವ್ ಅವರ ಪುತ್ರ. ವಿನಯ್ ಬಾದಾಮಿ, ೧೯ ವರ್ಷದೊಳಗಿನ ರಾಜ್ಯಮಟ್ಟದ ಕ್ರಿಕೆಟ್ ತಂಡದ ನಾಯಕರಾಗಿದ್ದರು.

<><*<><>*><>

ಕೊರೋನಾ ಕಾಲದ ಬಿಕ್ಕಟ್ಟಿನಿಂದ ಹಿಡಿದು ಇಂದಿನ ಜಾಗತಿಕ ಆರ್ಥಿಕ ಸವಾಲುಗಳವರೆಗೆ ಪ್ರಧಾನಿ ನರೇಂದ್ರ ಮೋದಿ ಅವರು ದೇಶವನ್ನು ಮುನ್ನಡೆಸುತ್ತಿರುವ ರೀತಿ ಇಡೀ ಜಗತ್ತಿಗೆ ಮಾದರಿಯಾಗಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಕಾರವಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರು ಮುಂದಾಲೋಚನೆಯಿಂದ ಕೆಲವು ಸಲಹೆಗಳನ್ನು ನೀಡಿದ್ದು, ಭವಿಷ್ಯದಲ್ಲಿ ಎದುರಾಗಬಹುದಾದ ಗಂಭೀರ ಸಮಸ್ಯೆಗಳನ್ನು ತಡೆಯಲು ಅವರು ನೀಡುವ ಸೂಚನೆಗಳನ್ನು ಪಾಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸಿದ್ದಾರೆ. ದೇಶದ ಸುರಕ್ಷತೆ ಮತ್ತು ಆರ್ಥಿಕ ಸುಭದ್ರತೆಯ ದೃಷ್ಟಿಯಿಂದ ಪ್ರಧಾನಿಗಳ ಮಾರ್ಗದರ್ಶನ ನಮಗೆ ಅಗತ್ಯ ಎಂದು ಹೇಳಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  <>*><>